# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 349(401)
2. ಸದಸ್ಯರ ಹೆಸರು : ಶ್ರೀ.ವಿವೇಕ್‌ರಾವ್ ವಸಂತರಾವ್ ಪಾಟೀಲ್
3. ಉತ್ತರಿಸಬೇಕಾದ ದಿನಾಂಕ : 12.12.2018
4. ಉತ್ತರಿಸಬೇಕಾದ ಸಚಿವರು : ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಹಾಗೂ ಪರಿಸರ ಸಚಿವರು

| ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಬೆಕ್ಕೇರಿ ಗ್ರಾಮದಲ್ಲಿರುವ ಭಾಗ್ಯಶ್ರೀ ಲಗಮವ್ವ ಶುಗರ್ಸ್ ಪ್ರೈವೇಟ್ ಲಿಮಿಟೆಡ್ ಖಂಢಸಾರಿ ಸಕ್ಕರೆ ಕಾರ್ಖಾನೆಯು ಪರಿಸರ ಹಾಗೂ ಮಾಲಿನ್ಯ ನಿಯಂತ್ರಣ ಇಲಾಖೆಯಿಂದ ಅನುಮತಿ ಪಡೆದು ಪ್ರಾರಂಭಿಸಲಾಗಿದೆಯೇ; (ಅನುಮತಿ ಪಡೆದಿದ್ದಲ್ಲಿ ಅದರ ಮಾಹಿತಿ ಒದಗಿಸುವುದು). | ರಾಯಭಾಗ ತಾಲ್ಲೂಕಿನ ಬೆಕ್ಕೇರಿ ಗ್ರಾಮದ ಸರ್ವೆ ನಂ.260ರಲ್ಲಿ ಮೆ: ಭಾಗ್ಯಶ್ರೀ ಲಗಮವ್ವ ಶುಗರ್ಸ್ ಪ್ರೈವೇಟ್ ಲಿಮಿಟೆಡ್ ಇವರಿಗೆ ವರ್ಷಕ್ಕೆ 72,000 ಟನ್ ಬೆಲ್ಲ ತಯಾರಿಸುವ ಘಟಕವನ್ನು ಸ್ಥಾಪಿಸಲು ಜಲ (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ 1974 ಹಾಗೂ ವಾಯು (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ 1981ರ ಅಡಿಯಲ್ಲಿ ದಿನಾಂಕ: 08.04.2010ರಂದು ಸ್ಥಾಪನಾ ಸಮ್ಮತಿ ಪತ್ರವನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ನೀಡಿರುತ್ತದೆ. |
| ಆ | ಸದರಿ ಸಕ್ಕರೆ ಕಾರ್ಖಾನೆಯು ಸಂಬಂಧಿಸಿದ ಇಲಾಖೆಯಿಂದ ಅನುಮತಿ ಪಡೆಯದೇ ಇದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು? | ಸದರಿ ಕೈಗಾರಿಕೆಯು ಸ್ಥಾಪನೆಗೊಂಡ ನಂತರ ಕಾರ್ಯಚರಣೆ ನಡೆಸಲು ಜಲ ಮತ್ತು ವಾಯು ಕಾಯ್ದೆಗಳ ಅಡಿಯಲ್ಲಿ ಚಾಲನಾ ಸಮ್ಮತಿ ಪತ್ರ ಪಡೆಯಬೇಕಾಗಿರುತ್ತದೆ. ಕೈಗಾರಿಕೆಯು, ಚಾಲನಾ ಸಮ್ಮತಿ ಪತ್ರಕ್ಕಾಗಿ ಅರ್ಜಿ ಸಲ್ಲಿಸದೆ ಕಾರ್ಯಾಚರಣೆ ನಡೆಸುತ್ತಿದ್ದು, ಕಾರಣ ಕೇಳುವ ನೋಟಿಸ್ ಜಾರಿಮಾಡಲಾಗಿದ್ದು, ಕೈಗಾರಿಕೆಯು ಉತ್ತರಿಸದ ಕಾರಣ, ಕೈಗಾರಿಕೆಗೆ 15 ದಿನಗಳ ಕಾಲಾವಕಾಶ ನೀಡಿ ದಿನಾಂಕ:20.11.2018 ರಂದು ಉದ್ದೇಶಿತ ಮುಚ್ಚುವ ಆದೇಶವನ್ನು ಜಾರಿ ಮಾಡಲಾಗಿರುತ್ತದೆ. |

ಸಂಖ್ಯೆ: ಅಪಜೀ 227 ಇಪಿಸಿ 2018

(ಆರ್. ಶಂಕರ್)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು.